Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 07–10–2021

**ಪತ್ರಿಕಾ ಪ್ರಕಟಣೆ:**

# ವಿದ್ಯಾರ್ಥಿಗಳಿಂದ ಝೂ ಪ್ರಾಣಿಗಳ ದತ್ತು ಸ್ವೀಕಾರ

ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ, ಹಳಿಯಾಳದ ಸಿವಿಲ್ ಇಂಜನಿಯರಿಂಗ್ ವಿಭಾಗದ ವಿದ್ಯಾರ್ಥಿಗಳು ಮತ್ತು ಬೋಧಕ ಸಿಬ್ಬಂದಿಗಳು ಬೆಳಗಾವಿಯ ಭೂತರಾಮನಹಟ್ಟಿಯಲ್ಲಿರುವ ರಾಣಿ ಚೆನ್ನಮ್ಮ ಕಿರು ಮೃಗಾಲಯದ ಪ್ರಾಣಿಗಳನ್ನು ದತ್ತು ಪಡೆದುಕೊಂಡಿದ್ದಾರೆ.

ವನ್ಯಜೀವಿ ಸಪ್ತಾಹದ ಅಂಗವಾಗಿ ಅಕ್ಟೋಬರ್ 02 ರಂದು ಬೆಳಗಾವಿ ಅರಣ್ಯ ಇಲಾಖೆ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಸಿಬ್ಬಂದಿಗಳು ಭೇಟಿ ನೀಡಿ ಪ್ರಾಣಿ ಸಂಗ್ರಹಾಲಯಕ್ಕೆ 25 ಸಾವಿರ ರೂಪಾಯಿಗಳ ದೇಣಿಗೆ ನೀಡಿದರು ಮತ್ತು ಈ ಮೂಲಕ ಎರಡು ಕೃಷ್ಣ ಮೃಗಗಳನ್ನು ಒಂದು ವರ್ಷ ಮತ್ತು ಒಂದು ಕೊಂಡದ ಕುರಿಯನ್ನು ಎರಡು ವರ್ಷಗಳ ಕಾಲ ದತ್ತು ಪಡೆದುಕೊಳ್ಳಲಾಯಿತು.

ವನ್ಯ ಜೀವಿ ಸಂರಕ್ಷಣೆಗೆ ಕೊಡುಗೆ ನೀಡಿದ ಮಹಾವಿದ್ಯಾಲಯದ ಸಿವಿಲ್ ವಿಭಾಗ ಮುಖ್ಯಸ್ಥರಾದ ಪ್ರೊ. ಹರ್ಷ ಜಾಧವ್, ಪ್ರೊ. ಹರ್ಷವರ್ಧನ್, ಪ್ರೊ. ರಾಕೇಶ ಪಾಟೀಲ್ ಮತ್ತು ವಿದ್ಯಾರ್ಥಿಗಳ ಕುರಿತು ಆಡಳಿತ ಮಂಡಳಿ ಅಧ್ಯಕ್ಷರಾದ ಶ್ರೀ. ರಾಜೇಂದ್ರ ಬೆಳಗಾಂವಕರ್, ಪ್ರಾಂಶುಪಾಲರಾದ ಡಾ॥ ವಿ ಎ ಕುಲಕರ್ಣಿ ಮತ್ತು ಸಿಬ್ಬಂದಿ ವರ್ಗದವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal


ಅಂಗವಾಗಿ
BELAGAVI
ZOO